



ಅರುಣ ಪಿ. ಭಟ್ಟ

## ವಾರಭವಿಷ್ಯ: 08.06.2023ರಿಂದ 14.06.2023ವರೆಗೆ




ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ದೀರ್ಘ ಕಾಲದ ನಂತರ ಸೋದರ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಇನ್ನು ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜೊತೆ ಬಾಂಧವ್ಯ ಉತ್ತಮವಾಗಿರುತ್ತದೆ. ಶುಭದಿನ 09. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವರ್ಚಸ್ಸು, ಸ್ಥಾನಮಾನ ಕೂಡ ಇದೇ ಅವಧಿಯಲ್ಲಿ ಹೆಚ್ಚಾಗಲಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವೈಯಕ್ತಿಕ ಜೀವನದಲ್ಲಿ ಸಣ್ಣ ಪುಟ್ಟ ವಿಷಯಗಳಿಗೂ ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ 10. ಹನುಮಾನ್ ಚಾಲಿಸ್ ಪಠಿಸಿರಿ.




ಉದ್ಯಮಿಗಳಿಗೆ ಅತ್ಯುತ್ತಮವಾದ ಸಮಯ ಇದು. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ಜತೆಗೆ ನಿಮ್ಮ ಉತ್ಸಾಹ ಸಹ ಹೆಚ್ಚಾಗಲಿದೆ. ಶುಭದಿನ 11. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಿದ್ಯಾರ್ಥಿಗಳಿಗೆ ಅನುಕೂಲಕರ ಅವಧಿ ಇದು. ತಂತ್ರಜ್ಞಾನ, ಸಾಹಿತ್ಯ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಲವು ಅವಕಾಶಗಳು ಸಿಗಲಿವೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ವಾರದ ಅಂತ್ಯದ ವೇಳೆ ತುಂಬ ಒಳ್ಳೆ ಮೊತ್ತ ನಿಮ್ಮ ಪಾಲಿಗೆ ದೊರೆಯಲಿದೆ. ಶುಭದಿನ 09. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಶ್ರಮ ಹಾಕುತ್ತೀರಿ. ಹಣ ಹೂಡಿಕೆಯಲ್ಲಿ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರು ಪ್ರಗತಿ ಕಾಣುತ್ತೀರಿ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಶುಭದಿನ 13. ಲಿಂಗಾಷ್ಟಕ ಪಠಿಸಿರಿ.




ವಾರದ ಆರಂಭದಿಂದಲೇ ನಿಮಗೆ ಇರುವ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿ ಪಾಳಯದವರು ಬಹಳ ಪ್ರಯತ್ನ ಪಡುತ್ತಾರೆ. ನೀವು ಈ ಬಗ್ಗೆ ಬಹಳ ಎಚ್ಚರಿಕೆಯಿಂದ ಇರಬೇಕು. ಉನ್ನತ ಶಿಕ್ಷಣಕ್ಕೆ ಅನುಕೂಲ ಇದೆ. ಶುಭದಿನ 12. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಶುಭದಿನ 11. ಸೌಂದರ್ಯ ಲಹರಿ ಪಠಿಸಿರಿ.




ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತ ಯಶಸ್ಸು ದೊರೆಯುವ ಅವಕಾಶಗಳಿವೆ. ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಆದಾಯ ಮೂಲಗಳು ನೀವು ಅಂದುಕೊಂಡಿದ್ದಕ್ಕಿಂತ ಹೆಚ್ಚಿನ ಲಾಭವನ್ನು ತಂದುಕೊಡುವ ಸಾಧ್ಯತೆ ಇದೆ. ವ್ಯಾಪಾರಸ್ಥರ ಬೆಳವಣಿಗೆಗೆ ಅವಕಾಶ ದೊರೆಯುತ್ತದೆ. ಶುಭದಿನ 10. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಉದ್ಯೋಗಸ್ಥರು ತಮ್ಮ ಗೌರವ ಉಳಿಸಿಕೊಳ್ಳುವುದು ಮುಖ್ಯವಾಗುತ್ತದೆ. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಪೋಷಕರ ಅಗತ್ಯಗಳನ್ನು ಅರಿತು ಅವುಗಳನ್ನು ಪೂರೈಸಲು ಹೆಚ್ಚು ಪ್ರಯತ್ನ ಪಡುತ್ತೀರಿ. ಅನಾರೋಗ್ಯ ಸಮಸ್ಯೆ ಕಾಡಲಿದೆ. ಶುಭದಿನ 11. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಜ್ಞಾನ ಹೆಚ್ಚಿಸಿಕೊಳ್ಳಲು ಅವಕಾಶ ದೊರೆಯಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆಯುತ್ತದೆ. ಮನೆ ಹಾಗೂ ಕುಟುಂಬದಲ್ಲಿ ಸಕಾರಾತ್ಮಕವಾದ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗುತ್ತೀರಿ. ನಿಮ್ಮ ಶ್ರಮದ ಮೂಲಕವೇ ಆದಾಯ ಹೆಚ್ಚಳಕ್ಕೆ ಅವಕಾಶ ದೊರೆಯುತ್ತದೆ. ಸಾಮಾಜಿಕವಾಗಿ ಹಾಗೂ ರಾಜಕೀಯವಾಗಿ ವರ್ಚಸ್ಸು ಉಳಿಸಿಕೊಳ್ಳುತ್ತೀರಿ. ಶುಭದಿನ 12. ವಿಷ್ಣು ಸಹಸ್ರನಾಮ ಮಾಡಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತಾ ಸಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಕುಟುಂಬದವರ ಜತೆಗೆ ಉತ್ತಮ ಬಾಂಧವ್ಯ ಏರ್ಪಡುತ್ತದೆ. ಆರೋಗ್ಯ ಸಮಸ್ಯೆಗಳು ಕೂಡ ನಿವಾರಣೆ ಆಗುತ್ತದೆ. ಶುಭದಿನ 13. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ನೀವು ಕಾರ್ಯ ನಿರ್ವಹಿಸುವ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರವಾಗಿಯೇ ಪ್ರಯಾಣ ಮಾಡಬೇಕಾಗುತ್ತದೆ. ಮನೆ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡಲಿದ್ದೀರಿ. ಶುಭದಿನ 12. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.